**ಸಾಕ್ಷಿಯನ್ನು ದಿನಾಂಕ 19-08-2023 ರಂದು ಕರೆಯಿಸಿ ಪ್ರಮಾಣ ವಚನ ನೀಡಲಾಯಿತು.**

**ಮುಖ್ಯ ವಿಚಾರಣೆಃ ಶ್ರೀ.ಕೆ.ಆರ್. ವಕೀಲರವರಿಂದಃ**

**ನನ್ನ ಮುಖ್ಯ ವಿಚಾರಣೆಯ ಬದಲಾಗಿ ಸಲ್ಲಿಸಿರುವ ಪ್ರಮಾಣಪತ್ರದಲ್ಲಿನ ವಿಷಯಗಳೆಲ್ಲವು ಸತ್ಯವಾಗಿರುತ್ತದೆ. ಅವುಗಳನ್ನು ನಾನೇ ಹೇಳಿ ಬರೆಯಿಸಿರುತ್ತೇನೆ. ಅದರಲ್ಲಿ ಇರುವ ಸಹಿ ನನ್ನದೇ ಇರುತ್ತದೆ. ಸದರಿ ಸಾಕ್ಷಿಯನ್ನು ಪಿಡಬ್ಲ್ಯೂ-1 ಎಂದು ಪರಿಗಣಿಸಲಾಯಿತು.**

ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ನಾನು ಹಾಜರುಪಡಿಸಿರುವ ದಾಖಲೆಗಳನ್ನು ನೋಡಿದರೆ ಗುರುತಿಸುತ್ತೇನೆ. ಹರಪನಹಳ್ಳಿ ಪುರಸಭೆಯ ಅಧಿಕಾರಿಗಳು ನೀಡಿರುವ ಅಲಭ್ಯ ಪ್ರಮಾಣಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ದಿನಾಂಕಃ 15-03-2032 ರಂದು ವಿಶ್ವವಾಣಿ ದಿನಪತ್ರಿಕೆಯಲ್ಲಿ ಪ್ರಕಟವಾದ ಆಯ್ದ ಭಾಗವನ್ನು ನಿಪಿ-2 ಎಂದು ಗುರುತಿಸಲಾಯಿತು. ಒಂದು ಹಿಂಬರಹ ಮತ್ತು ಅದರೊಂದಿಗೆ ಪ್ರಮಾಣ ಪತ್ರವನ್ನು ಹಾಜರಪಡಿಸಿದ್ದು ಅವುಗಳನ್ನು ಅನುಕ್ರಮವಾಗಿ ನಿಪಿ-3 ಮತ್ತು 3(ಎ) ಎಂದು ಗುರುತಿಸಲಾಯಿತು. ಅರ್ಜಿಯಲ್ಲಿ ಕೋರಿದಂತೆ ಆದೇಶ ಮಾಡಬೇಕಾಗಿ ವಿನಂತಿ.

**ಪಾಟೀಸವಾಲುಃ** ಎದುರುದಾರರು ಏಕಪಕ್ಷೀಯವಾಗಿರುವುದರಿಂದ ಸದರಿಯವರ ಪರ ಸಾಕ್ಷಿಯ ಪಾಟೀಸವಾಲನ್ನು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆ ಇಲ್ಲ.**

( ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತ ಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

**ಓ. ಹೇ ಕೇ ಸರಿಯಿದೆ.**

**ಸಿವಿಲ್ ನ್ಯಾಯಾಧೀಶರು ಮತ್ತು**

**ಜೆ.ಎಂ.ಎಫ್.ಸಿ. ಹರಪನಹಳ್ಳಿ**